## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :774(983)
ಸದಸ್ಯರ ಹೆಸರು :ಶ್ರೀ. ಹೆಚ್. ಎಸ್ ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು
ಉತ್ತರಿಸುವ ದಿನಾಂಕ :24.07.2024

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳಿಗೆ ಕೇಂದ್ರ ಸ್ಥಾನದಲ್ಲಿ ಕಛೇರಿ ಇದೆಯೇ; (ವಿವರ ನೀಡುವುದು) | ಕಂದಾಯ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಆಡಳಿತ ಅಧಿಕಾರಿಗಳಿಗೆ ಸರ್ಕಾರಿ ಕಟ್ಟಡಗಳು ಲಭ್ಯವಿರುವ ಕಡೆ ಸರ್ಕಾರಿ ಕಛೇರಿಗಳಲ್ಲಿ, ಗ್ರಾಮಪಂಚಾಯಿತಿ ಕಟ್ಟಡಗಳಲ್ಲಿ ಹಾಗೂ ಇತರೆ ಸರ್ಕಾರಿ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸಲು ಅವಕಾಶ ಕಲ್ಪಿಸಲಾಗಿದೆ.<br>ಸರ್ಕಾರಿ ಕಟ್ಟಡಗಳು ಲಭ್ಯವಿಲ್ಲದ ಕಡೆಗಳಲ್ಲಿ ಖಾಸಗಿ ಕಟ್ಟಡಗಳಲ್ಲಿ ಬಾಡಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸಲು ಅವಕಾಶ ಕಲ್ಪಿಸಲಾಗಿದೆ. |
| ಆ) | ಗ್ರಾಮ ಆಡಳಿತ ಅಧಿಕಾರಿಗಳಿಗೆ ಕಛೇರಿಯಲ್ಲಿ ಇತ್ತೀಚಿಗೆ ನೀಡುವ ಕೆಲಸಗಳಿಂದ E-office ಮತ್ತು ಮೊಬೈಲ್ ಆಪ್‌ಗಳಲ್ಲಿ ಮಾಡುವಂತಹ ಕೆಲಸಗಳಿಗೆ ಮೂಲ ಭೂತ ಸೌಕರ್ಯ ಸರ್ಕಾರವು ನೀಡಿದೆಯೇ; | ಮೊಬೈಲ್ ಆಪ್‌ಗಳಲ್ಲಿ ನಿರ್ವಹಿಸಬಹುದಾದಂತಹ ಕೆಲಸ ಕಾರ್ಯಗಳನ್ನು ಗ್ರಾಮ ಆಡಳಿತ ಅಧಿಕಾರಿಗಳು ತಮ್ಮ ವೈಯುಕ್ತಿಕ ಮೊಬೈಲ್‌ಗಳ ಮೂಲಕ ನಿರ್ವಹಿಸುತ್ತಿದ್ದು, ಇ-ಆಫೀಸ್ ತಂತ್ರಾಂಶದಲ್ಲಿ ಕಾರ್ಯ ನಿರ್ವಹಿಸಲು ಪರಿಕರಗಳು ಮತ್ತು ಇಂಟರ್‌ನೆಟ್ ಸೌಲಭ್ಯಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ. |
| ಇ) | ಗ್ರಾಮ ಆಡಳಿತ ಅಧಿಕಾರಿಗಳ ಬಳಿ ಪಹಣಿಗೆ ಆಧಾರಲಿಂಕ್ ಮಾಡಿಸುತ್ತಿದ್ದು ಈ ಬಗ್ಗೆ ಯಾವುದಾದರೂ ಸರ್ಕಾರಿ ಆದೇಶ ಹೊರಡಿಸಿದೆಯೇ; ಹಾಗೂ ಇದರಿಂದ ಸಾರ್ವಜನಿಕರಿಗೆ ಆಗುವ ಉಪಯೋಗಗಳ ಮಾಹಿತಿಯನ್ನು ಅಧಿಕೃತವಾಗಿ ಪ್ರಚಾರ ಪಡಿಸಿದೆಯೇ; (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ:ಕಂಇ 170 ಟಿ. ಆರ್.ಎಂ. 2023 ದಿನಾಂಕ:21.11.2023 ರಂತೆ ಪಹಣಿಗಳಿಗೆ ಆಧಾರ್ ಸೀಡಿಂಗ್ ಮಾಡುವ ಕಾರ್ಯದ ಕುರಿತು ಸಲಹೆ ಸೂಚನೆಗಳನ್ನು ನೀಡಲು ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯ ಸಲಹೆ ಮೇರೆಗೆ ಆಧಾರ್ ಸೀಡಿಂಗ್ ತಂತ್ರಾಂಶವನ್ನು ಅಭಿವೃದ್ದಿಪಡಿಸಿದ್ದು, ಸದರಿ ತಂತ್ರಾಂಶದಲ್ಲಿ ಆಧಾರ್ ಸೀಡಿಂಗ್ ಕಾರ್ಯವನ್ನು ಪೂರ್ಣಗೊಳಿಸಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಂದಾಯ ಆಯುಕ್ತರು, ಕಂದಾಯ ಆಯುಕ್ತಾಲಯ ಬೆಂಗಳೂರು ಇವರ ಪತ್ರ ಸಂಖ್ಯೆ Rc-BMCOTECH (btmb)/91/2023 E-1252325 ದಿನಾಂಕ:12-02-2024 ರಲ್ಲಿ ನಿರ್ದೇಶನ ನೀಡಲಾಗಿದೆ.<br>ಇದರಿಂದ ಸಾರ್ವಜನಿಕರಿಗೆ ಆಗುವ ಉಪಯೋಗಗಳ ಕುರಿತಂತೆ ಮಾಹಿತಿಯನ್ನು ದಿನ ಪತ್ರಿಕೆಗಳಲ್ಲಿ, ನಾಡಕಛೇರಿ, ಗ್ರಾಮ ಪಂಚಾಯಿತಿ ಕಛೇರಿಗಳಲ್ಲಿ ಹಾಗೂ ಮಾಧ್ಯಮಗಳ ಮೂಲಕ ಪ್ರಚುರಪಡಿಸಲಾಗುತ್ತಿದೆ. |
| ಈ) | ಗ್ರಾಮ ಆಡಳಿತ ಅಧಿಕಾರಿಗಳಿಗೆ ಕಾಲಕಾಲಕ್ಕೆ ಮುಂಬಡ್ತಿ ನೀಡಲಾಗುತ್ತಿದೆಯೇ? | ಗ್ರಾಮ ಆಡಳಿತ ಅಧಿಕಾರಿಗಳಿಗೆ ಕಾಲ ಕಾಲಕ್ಕೆ ಖಾಲಿ ಹುದ್ದೆಗಳಿಗೆ ಅನುಗುಣವಾಗಿ ಮುಂಬಡ್ತಿ ನೀಡಲಾಗುತ್ತಿದ್ದು, ಪ್ರಸ್ತುತ ಗ್ರಾಮ ಆಡಳಿತ ಅಧಿಕಾರಿ ಮತ್ತು ದ್ವಿತೀಯ ದರ್ಜೆ ಸಹಾಯಕ ವೃಂದದ ನೌಕರರ ಸಂಯುಕ್ತ ಜೇಷ್ಠತಾ ಪಟ್ಟಿಗೆ ಸಂಬಂದಿಸಿದಂತೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ WP 329/2023 ದಲ್ಲಿ ಪ್ರಕರಣ ದಾಖಲಾಗಿದ್ದು, ಮಾನ್ಯ ಉಚ್ಚ ನ್ಯಾಯಾಲಯದ ಅಂತಿಮ ತೀರ್ಪಿನಂತೆ ಪರಿಶೀಲಿಸಿ, ನಿಯಮಾನುಸಾರ ಬಡ್ತಿ ನೀಡಲು ಕ್ರಮವಹಿಸಲಾಗುವುದು. |

**ಕಂಇ 77 ಡಬ್ಲ್ಯೂಬಿಆರ್ 2024**

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು